ದಿನಾಂಕಃ 19-01-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಃ** ವಾದಿ ಪರ ವಕೀಲರಿಂದ,

1) ದಿನಾಂಕ 02.11.2017 ರಂದು ಪ್ರತಿವಾದಿಯವರು ಬರೆದುಕೊಟ್ಟಿರುವ ಕರಾರು ಪತ್ರವನ್ನು ಹಾಜರುಪಡಿಸುತ್ತೇನೆ ಸದರಿ ದಾಖಲೆಯನ್ನು ನಿಶಾನೆ.ಪಿ-4 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರಿಂದ**

1) ನಾನು ಹತ್ತನೇ ತರಗತಿಯವರೆಗೆ ವ್ಯಾಸಂಗ ಮಾಡಿರುತ್ತೇನೆ. ನಾನು ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಶುಶ್ರೂಷಿಕಿ ಆಗಿ ಕೆಲಸ ಮಾಡುತ್ತಿದ್ದು, ಈಗ ನಿವೃತ್ತಿ ಹೊಂದಿರುತ್ತೇನೆ. ನನಗೆ ವಾದ ಪತ್ರ ಮತ್ತು ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಬರೆದಿರುವ ವಿಷಯಗಳು ಗೊತ್ತಿರುವುದಿಲ್ಲ ಎಂದರೆ ಸರಿಯಲ್ಲ. ದಿನಾಂಕ 23.11.2015 ರಂದು ಕರಾರು ಪತ್ರ ಆಗಿರುತ್ತದೆ.

2) ದಾವಾ ಸ್ವತ್ತಿನ ನಿವೇಶನ ಸಂಖ್ಯೆ 785 ಆಗಿರುತ್ತದೆ. ದಾವಾ ಸ್ವತ್ತು ಪ್ರತಿವಾದಿಗೆ ಸೇರಿರುತ್ತದೆ ಎಂದರೆ ಸರಿ. ದಾವಾ ಸ್ವತ್ತಿನಲ್ಲಿ ಪ್ರತಿವಾದಿ ಸ್ವಾಧೀನ ಇರುತ್ತಾರೆ ಎಂದರೆ ಸರಿ. ದಾವಾ ಸ್ವತ್ತನ್ನು ಪ್ರತಿವಾದಿ ದಿನಾಂಕ 29.10.2010 ರಂದು ನಮ್ಮ ಕುಟುಂಬದ ಸದಸ್ಯರಿಂದ ಖರೀದಿ ಮಾಡಿರುತ್ತಾರೆ ಎಂದರೆ ಸರಿ. ನನ್ನ ಗಂಡನ ಸಹೋದಯರಿಯರು ವಿಭಾಗ ಕೋರಿ ಅಸಲು ದಾವೆ ಸಂಖ್ಯೆ 327/2013 ರಂತೆ ಮಾನ್ಯ ಪ್ರಧಾನ ಸಿವಿಲ್ ನ್ಯಾಯಾಲಯದಲ್ಲಿ ದಾವೆ ಸಲ್ಲಿಸಿದ್ದರು ಎಂದರೆ ನನಗೆ ಗೊತ್ತಿಲ್ಲ. ಸದರಿ ದಾವೆಯ ವಿಷಯ ನನಗೆ ಮತ್ತು ನನ್ನ ಗಂಡನಿಗೆ ಮಾಹಿತಿ ಇತ್ತು ಎಂದರೆ ಸರಿಯಲ್ಲ. ನನಗೆ ಸದರಿ ದಾವೆಯ ಬಗ್ಗೆ ಮಾಹಿತಿ ಇದ್ದರೂ ಸಹ ನಾನು ಇಲ್ಲ ಎಂದು ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ನನ್ನ ಗಂಡನ ಮಾತು ಕೇಳಿ ಸುಳ್ಳು ದಾವೆ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

3) ಅಸಲು ದಾವೆ ಸಂಖ್ಯೆ 327/2013 ದಾವೆಯು ದಿನಾಂಕ 03.07.2018 ರಂದು ಭಾಗಶ: ಡಿಕ್ರಿ ಆಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಪ್ರಾಥಮಿಕ ಡಿಕ್ರಿಯ ಪ್ರಕಾರ ಸದರಿ ದಾವೆಯ ವಾದಿಗಳು ಎಫ್ ಡಿ ಪಿ 24/2021 ದಾಖಲು ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಪ್ರತಿವಾದಿ ಯಾವತ್ತೂ ಸಹ ನನ್ನ ಪರವಾಗಿ ಕರಾರು ಪತ್ರ ಬರೆದುಕೊಟ್ಟಿರುವುದಿಲ್ಲ ಎಂದರೆ ಸರಿಯಲ್ಲ.

4) ಛಾಪಾ ಕಾಗದವನ್ನು ನಾನೇ ಖರೀದಿ ಮಾಡಿರುತ್ತೇನೆ. ನಿಶಾನೆ ಪಿ-01 ದಾಖಲೆಯನ್ನು ಮಿರ್ಲೆ ಗ್ರಾಮದಲ್ಲಿ ತಯಾರು ಮಾಡಿರುತ್ತೇವೆ. ನಿಶಾನೆ ಪಿ-1 ಪತ್ರ ತಯಾರು ಮಾಡುವ ಕಾಲಕ್ಕೆ ನಾನು, ನನ್ನ ಗಂಡ ಮತ್ತು ನನ್ನ ಅತ್ತೆ ಮಾವ ಮಾತ್ರ ಇದ್ದರೂ ಬೇರೆ ಯಾರು ಇರಲಿಲ್ಲ. ಅತ್ತೆ ಮಾವ ಎಂದರೆ ನನ್ನ ಗಂಡನ ತಂದೆ ತಾಯಿ ಆಗಿರುತ್ತಾರೆ. ನಿಶಾನೆ ಪಿ-4 ಕರಾರುಪತ್ರ ರೂ. 5,50,000/- ಆಗಿರುತ್ತದೆ. ನನ್ನ ಗಂಡನ ತಂದೆ 2003 ರಲ್ಲಿ ತೀರಿಕೊಂಡಿರುತ್ತಾರೆ. ನನ್ನ ಅತ್ತೆ 2004 ನೇ ಸಾಲಿನಲ್ಲಿ ತೀರಿಕೊಂಡಿರುತ್ತಾರೆ. ನಾನು ಸುಳ್ಳು ದಾವೆಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ನಿಶಾನೆ ಪಿ-4 ಕರಾರು ಪತ್ರವನ್ನು ಸೃಷ್ಟಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ